ಈ) ಸರ್ಕಾರದ ವತಿಯಿಂದ ಶೀಥಲಗೃಹ ನಿರ್ಮಿಸುವ ಉದ್ದೇಶ ಇರುವುದಿಲ್ಲ ಖಾಸಗಿಯವರೇ ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಮುಂದೆ ಬಂದಲ್ಲಿ ಸರ್ಕಾರದ ಯೋಜನೆಗಳಡಿಯಲ್ಲಿ ಸಹಾಯಧನವನ್ನು ನೀಡಲಾಗುವುದು

131 (260) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) 2006–07 ಆಯವ್ಯಯದಲ್ಲಿ ಕೃಷಿ ಮಾರುಕಟ್ಟೆ ಇಲಾಖೆಯ ವತಿಯಿಂದ ಯಾವ ಯಾವ ಹೊಸ ಕಾರ್ಯಕ್ರಮಗಳನ್ನು ಪ್ರಕಟಿಸಲಾಗಿದೆ

ಆ) ಈ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ಹಣ ಎಷ್ಟು ,

ಇ) ಈ ಪೈಕಿ ಇಲ್ಲಿಯವರೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಈ ಹಣದಲ್ಲಿ ಯಾವ ಯಾವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ (ಜಿಲ್ಲಾವಾರು ವಿವರಗಳನ್ನು ಒದಗಿಸುವುದು) ,

ಈ) ಕೃಷಿ ಮಾರುಕಟ್ಟೆ ಇಲಾಖೆಯಲ್ಲಿ ರಾಜ್ಯ ಸರ್ಕಾರದ ನೆರವನ್ನು ಹೊರತುಪಡಿಸಿ ನಬಾರ್ಡ್‌ನಿಂದ ಯಾವ ಯಾವ ಕಾರ್ಯಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಇದಕ್ಕಾಗಿ ಕೇಂದ್ರದಿಂದ ಬಂದಿರುವ ಹಣದ ಮೊತ್ತವೆಷ್ಟು,

ಉ) ಈ ಹಣವನ್ನು ಹಂಚಿರುವ ಜಿಲ್ಲಾವಾರು ವಿವರಗಳನ್ನು ನೀಡುವುದು ?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)

ಅ) ಆ) ಮತ್ತು ಇ) 156 ಗ್ರಾಮೀಣ ಸಂತೆಗಳನ್ನು ರೂ 17 00 ಕೋಟಿಗಳಲ್ಲಿ ಅಭಿವೃದ್ಧಿ ಪಡಿಸಲು ನಬಾರ್ಡ್‌ನಿಂದ ಅನುಮೋದನೆ ನಿರೀಕ್ಷಿಸಲಾಗಿದೆ

ಈ) ಗ್ರಾಮೀಣ ಸಂತೆಗಳ ಅಭಿವೃದ್ಧಿ ಹೊರತುಪಡಿಸಿ ಕೃಷಿ ಮಾರುಕಟ್ಟೆ ಇಲಾಖೆಯಲ್ಲಿ ಬಾಕಿ ಯಾವುದೇ ಕಾರ್ಯಕ್ರಮಗಳನ್ನು ನಬಾರ್ಡ್ ನೆರವಿನಿಂದ ಕೈಗೊಂಡಿರುವುದಿಲ್ಲ

ಉ) ಪ್ರಶ್ನೆ "ಅ" ಗೆ ನೀಡಿದ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

132 (261) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) 2005–06ನೇ ಆಯವ್ಯಯದಲ್ಲಿ ರಾಜ್ಯದಲ್ಲಿ ತೋಟಗಾರಿಕೆಯನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು 2006ರ ಆಯವ್ಯಯದಲ್ಲಿ ಪ್ರಕಟಿಸಿತ್ತು (ಯೋಜನೆಯ ವಿವರಗಳನ್ನು ಜಿಲ್ಲಾವಾರು ಒದಗಿಸುವುದು) ,

ಆ) ಇದಕ್ಕೆ ಅಗತ್ಯವಿರುವ ಹಣವೆಷ್ಟು ಹಾಗೂ ಈ ಪೈಕಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಮತ್ತು ಖರ್ಚು ಮಾಡಿರುವ ಹಣದ ಮೊತ್ತವೆಷ್ಟು ,

ಇ) ಹೈದರಬಾದ್ ಕರ್ನಾಟಕ ಪ್ರದೇಶದಲ್ಲಿ ವಿಶೇಷವಾಗಿ ಬೀದರ್ ಜಿಲ್ಲೆಯಲ್ಲಿ ತೋಟಗಾರಿಕೆಯ ಅಭಿವೃದ್ಧಿಗಾಗಿ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ,

ಈ) ಇಲ್ಲಿ ತೋಟಗಾರಿಕೆ ಬೆಳೆಯನ್ನು ಬೆಳೆಯುವವರಿಗೆ ಯಾವ ರಿಯಾಯ್ತಿ ಮತ್ತು ವಿನಾಯ್ತಿಯನ್ನು ನೀಡಲಾಗುವುದು ?

ಶ್ರೀ ಶಶಿಕಾಂತ ಅಕ್ಕಪ್ಪ ನಾಯಕ (ತೋಟಗಾರಿಕೆ ಸಚಿವರು)

ಅ) ಜಿಲ್ಲಾವಾರು ವಿವರಗಳನ್ನು ಅನುಬಂಧ–1 ರಲ್ಲಿ ನೀಡಿದೆ

ಆ) ವಿವರಗಳನ್ನು ಅನುಬಂಧ–2 ರಲ್ಲಿ ನೀಡಿದೆ

ಇ) ಬೀದರ್ ಜಿಲ್ಲೆಯನ್ನು ಒಳಗೊಂಡಂತೆ ಹೈದರಬಾದ್ ಕರ್ನಾಟಕ ಪ್ರದೇಶದಲ್ಲಿ ತೋಟಗಾರಿಕೆ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ–3 ರಲ್ಲಿ ಒದಗಿಸಿದೆ

ಈ) ಬೀದರ್ ಜಿಲ್ಲೆ ಸೇರಿದಂತೆ ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಯನ್ನು ಬೆಳೆಯುವವರಿಗೆ ರಿಯಾಯಿತಿ ಮತ್ತು ವಿನಾಯಿತಿಗಳನ್ನು ನೀಡಲಾಗುತ್ತಿರುವ ವಿವರಗಳನ್ನು ಅನುಬಂಧ–4 ರಲ್ಲಿ ಒದಗಿಸಿದೆ